**<u>ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ. ಹರೀಶ್ ಕುಮಾರ್, ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.</u>**

**<u>ವಿಷಯ:</u>**

ಮಂಗಳೂರು ನಗರದ ಪ್ರಧಾನ ರಸ್ತೆಯಲ್ಲಿ ಕಳೆದ ಎರಡು ವರ್ಷಗಳಿಂದ ಆಯೋಜಿಸಲಾಗುತ್ತಿರುವ ಫುಡ್ ಫೆಸ್ಟಿವಲ್ ಕಾರ್ಯಕ್ರಮದಿಂದಾಗಿ ಸಂಚಾರ ದಟ್ಟಣೆ ಮತ್ತು ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದ್ದು, ಇದನ್ನು ತಪ್ಪಿಸಲು ನಗರದೊಳಗಿರುವ ಬೃಹತ್ ಮೈದಾನದಲ್ಲಿ ಕಾರ್ಯಕ್ರಮ ಆಯೋಜನೆಗೆ ಅವಕಾಶ ನೀಡಬೇಕೆನ್ನುವ ಬಗ್ಗೆ.

**<u>ಉತ್ತರ:</u>**

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಬ್ಬಾಸ್ ಸಂಸ್ಥೆಯ ಕಟ್ಟಡದ ಎದುರಿನಿಂದ ನಾರಾಯಣ ಗುರು ವೃತ್ತವಾಗಿ ಮಣ್ಣಗುಡ್ಡ ಗುರ್ಜಿ ಜಂಕ್ಷನ್ ವರೆಗೆ ಹಾಗೂ ಕೆನರಾ ಬ್ಯಾಂಕ್ ಸ್ಕೂಲ್ ಮತ್ತು ನೆಹರು ಅವೆನ್ಯೂ ರಸ್ತೆಯಾಗಿ ಪಬ್ಬಾಸ್ ವರೆಗೆ ಕಳೆದ 2 ವರ್ಷಗಳಿಂದ ಮೆ|| ಕುಡ್ಲ ಸಾಂಸ್ಕೃತಿ ಪ್ರತಿಷ್ಠಾನ, ಮಂಗಳೂರು ಇವರಿಗೆ ಆಹಾರೋತ್ಸವ ಮೇಳವನ್ನು ಆಯೋಜಿಸಲು ಅನುಮತಿ ನೀಡಲಾಗಿರುತ್ತದೆ. ಪ್ರಸ್ತತ ಈ ಮೇಳವನ್ನು ಆಯೋಜಿಸಲು ಪೊಲೀಸ್ ಆಯುಕ್ತರು, ಮಂಗಳೂರು ನಗರ ಇವರ ಪರವಾನಿಗೆ ಪತ್ರ, ಉಪ ಪೊಲೀಸ್ ಆಯುಕ್ತರು (ಕಾನೂನು ಮತ್ತು ಸುವ್ಯವಸ್ಥೆ), ಮಂಗಳೂರು ನಗರ ಇವರು ವಿಧಿಸಿ ನೀಡಿರುವ ಷರತ್ತುಬದ್ಧ ಅನುಮತಿ ಮೇರೆಗೆ ಪಾಲಿಕೆ ವತಿಯಿಂದ ನಿರಾಕ್ಷೇಪಣಾ ಪತ್ರ ನೀಡಲಾಗಿದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಬೇರೆ ಸೂಕ್ತ ಸ್ಥಳದಲ್ಲಿ ಸದರಿ ಆಹಾರ ಮೇಳವನ್ನು ಆಯೋಜಿಸಲು ಅಗತ್ಯ ಕ್ರಮವಹಿಸುವಂತೆ ಆಯುಕ್ತರು, ಮಂಗಳೂರು ಮಹಾನಗರ ಪಾಲಿಕೆ ಇವರಿಗೆ ತಿಳಿಸಲಾಗುವುದು.

**ಸಂಖ್ಯೆ: ನಅಇ 9 ಎಂಎಂಸಿ 2024 (ಇ)**

21/02/2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು